ಕರ್ನಾಟಕ ಸರ್ಕಾರ

**ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, ಮಲ್ಲೇಶ್ವರಂ, ಬೆಂಗಳೂರು-03**

ಸಂಖ್ಯೆ:ಕ.ಶಾ.ಪ&ಮೌ.ನಿ.ಮ/ಪೂ.ಪ.ಪು.ನೋ/2022-23 ದಿನಾಂಕ:21/04/2023

ಸುತ್ತೋಲೆ

ವಿಷಯ: 2023ನೇ ಸಾಲಿನಲ್ಲಿ ನಡೆಯಲಿರುವ ದ್ವಿತೀಯ ಪಿ.ಯು.ಸಿ ಪೂರಕ ಪರೀಕ್ಷೆಗೆ ಪುನರಾವರ್ತಿತ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸುವ ಬಗ್ಗೆ.

2023ನೇ ಸಾಲಿನಲ್ಲಿ ನಡೆಯಲಿರುವ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಗೆ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಈ ಕೆಳಕಂಡಂತೆ ದಿನಾಂಕ ನಿಗದಿಪಡಿಸಲಾಗಿದೆ. ಎಲ್ಲಾ ಕಾಲೇಜಿನ ಪ್ರಾಂಶುಪಾಲರುಗಳು ಈ ಸುತ್ತೋಲೆಯನ್ನು ಕಡ್ಡಾಯವಾಗಿ ಕಾಲೇಜಿನ ಸೂಚನಾ ಫಲಕದಲ್ಲಿ ಪ್ರಕಟಿಸುವುದು ಮತ್ತು ಪ್ರಾಂಶುಪಾಲರುಗಳು ಈ ಕೆಳಗಿನಂತೆ ಸೂಚನೆಗಳನ್ನು ಪಾಲಿಸುವುದು.

1. ಮಾರ್ಚ್ 2023ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳಿಗೆ ಅನುತ್ತೀರ್ಣ ಅಂಕಪಟ್ಟಿ ಅರ್ಜಿ (M C A) ಗಳನ್ನು ಮಂಡಲಿಯಿಂದ ನೀಡಲಾಗುವುದಿಲ್ಲ ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ ಮಂಡಲಿಯಿಂದ ನೀಡಲಾಗುವ ಫಲಿತಾಂಶ ಪಟ್ಟಿ (RESULT SHEET) ಯ ಆಧಾರದ ಮೇಲೆ ಪೂರಕ ಪರೀಕ್ಷೆಗೆ ನೋಂದಾಯಿಸಿಕೊಂಡು ಪರೀಕ್ಷಾ ಶುಲ್ಕ ಸ್ವೀಕರಿಸಿ ಮಂಡಲಿಯ PU EXAM ಲಾಗಿನ್‌ನಲ್ಲಿ ವಿದ್ಯಾರ್ಥಿಯ ಮಾಹಿತಿಯನ್ನು ಭರ್ತಿ ಮಾಡುವುದು.
2. 2023ನೇ ಸಾಲಿಗಿಂತ ಹಿಂದಿನ ಪರೀಕ್ಷೆಗಳಲ್ಲಿ ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳಿಂದ ಮೂಲ ಅನುತ್ತೀರ್ಣ ಅಂಕಪಟ್ಟಿ/ಅರ್ಜಿ ಅಥವಾ ಹಿಂದಿನ ಎಂ.ಸಿ.ಎಗಳ ಆಧಾರದ ಮೇಲೆ ಪರೀಕ್ಷಾ ಶುಲ್ಕಗಳನ್ನು ಸ್ವೀಕರಿಸಿ ಮಂಡಲಿಯ PU EXAM ಲಾಗಿನ್‌ನಲ್ಲಿ ವಿದ್ಯಾರ್ಥಿಗಳ ಮಾಹಿತಿಯನ್ನು ಭರ್ತಿ ಮಾಡುವುದು.
3. 2006 ರಿಂದ ಹಿಂದಿನ ವರ್ಷಗಳಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳಿಂದ ಮೂಲ ಅನುತ್ತೀರ್ಣ ಅಂಕಪಟ್ಟಿ/ಅರ್ಜಿ ಅಥವಾ ಹಿಂದಿನ ಎಂ.ಸಿ.ಎಗಳ ಆಧಾರದ ಮೇಲೆ ಪರೀಕ್ಷಾ ಶುಲ್ಕಗಳನ್ನು ಸ್ವೀಕರಿಸಿ ಸಂಬಂಧಿಸಿದ ದಾಖಲೆಗಳನ್ನು ಪ್ರಾಂಶುಪಾಲರು ದೃಢೀಕರಿಸಿ, ಮಂಡಲಿಗೆ ಸಲ್ಲಿಸುವುದು.
4. ಆಗಸ್ಟ್ 2022ರಲ್ಲಿ ನಡೆದ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆ ಹಾಗೂ 2023ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದು ಫಲಿತಾಂಶ ತಿರಸ್ಕರಿಸಿ 2023ರ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆ ಬರೆಯಲು ಇಚ್ಛಿಸಿದಲ್ಲಿ, ಅಂತಹ ವಿದ್ಯಾರ್ಥಿಗಳು ಮೂಲ ಅಂಕಪಟ್ಟಿ/ಫಲಿತಾಂಶ ಪಟ್ಟಿಗಳ ಆಧಾರದ ಮೇಲೆ ನಿಯಮಾನುಸಾರ ಫಲಿತಾಂಶ ತಿರಸ್ಕರಣೆಗೆ ಅರ್ಜಿಯನ್ನು ಇಲಾಖೆಗೆ ಸಲ್ಲಿಸುವುದು. ಇಲಾಖೆಯು ಅನುಮತಿ ನೀಡಿದ ನಂತರ ಮಂಡಲಿಯ PU EXAM ಲಾಗಿನ್‌ನಲ್ಲಿ ವಿದ್ಯಾರ್ಥಿಗಳು ಫಲಿತಾಂಶ ತಿರಸ್ಕರಿಸಿದ ಮಾಹಿತಿಯನ್ನು ದಾಖಲಿಸುವುದು.
5. ಸರ್ಕಾರದ ಆದೇಶ ಸಂಖ್ಯೆ: ಇಡಿ 195 ಡಿಜಿಡಿ 2017 ಬೆಂಗಳೂರು, ದಿನಾಂಕ 20/03/2018 ರಂತೆ ಪರೀಕ್ಷಾ ಶುಲ್ಕ ಹಾಗೂ ಫಲಿತಾಂಶ ತಿರಸ್ಕರಣಾ ಶುಲ್ಕ ಹಾಗೂ ದಂಡ ಶುಲ್ಕಗಳನ್ನು ಪರಿಷ್ಕರಿಸಿದೆ.

**2023ರಲ್ಲಿ ನಡೆಸಲಾಗುವ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಗೆ ಪುನರಾವರ್ತಿತ ಹಾಗೂ ಫಲಿತಾಂಶ ತಿರಸ್ಕರಿಸಿದ ವಿದ್ಯಾರ್ಥಿಗಳು ಪಾವತಿಸಬೇಕಾದ ಶುಲ್ಕಗಳ ವಿವರ:**

| ಪರೀಕ್ಷಾ ಶುಲ್ಕ (ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಹಾಗೂ ಪ್ರವರ್ಗ-1ರ ವಿದ್ಯಾರ್ಥಿಗಳನ್ನು ಹೊರತು ಪಡಿಸಿ) | |
|---|---|
| ಒಂದು ವಿಷಯಕ್ಕೆ | ರೂ. 140/- |
| ಎರಡು ವಿಷಯಕ್ಕೆ | ರೂ. 270/- |
| ಮೂರು ಅಥವಾ ಹೆಚ್ಚಿನ ವಿಷಯಗಳು | ರೂ. 400/- |

| | |
|---|---|
| ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಹಾಗೂ ಪ್ರವರ್ಗ-1ರ ವಿದ್ಯಾರ್ಥಿಗಳು ಸೇರಿದಂತೆ ಎಲ್ಲಾ ವಿದ್ಯಾರ್ಥಿಗಳಿಂದ ಕಡ್ಡಾಯವಾಗಿ ಪಡೆಯಬೇಕಾದ ಅಂಕಪಟ್ಟಿ ಶುಲ್ಕ | ರೂ. 50/- |

| **ಫಲಿತಾಂಶ ತಿರಸ್ಕರಣಾ ಶುಲ್ಕ** | |
|---|---|
| ಪ್ರಥಮ ಬಾರಿಗೆ ಒಂದು ವಿಷಯಕ್ಕೆ | ರೂ. 175/- |
| ದ್ವಿತೀಯ ಮತ್ತು ಅಂತಿಮ ಬಾರಿಗೆ ಒಂದು ವಿಷಯಕ್ಕೆ | ರೂ. 350/- |

**2023ರಲ್ಲಿ ನಡೆಸಲಾಗುವ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಗೆ ಪುನರಾವರ್ತಿತ ಅಭ್ಯರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು ನಿಗದಿಪಡಿಸಿರುವ ದಿನಾಂಕಗಳು:**

| ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕ ಪಾವತಿಸಲು ಹಾಗೂ ಪುನರಾವರ್ತಿತ ಮತ್ತು ಫಲಿತಾಂಶ ತಿರಸ್ಕರಿಸಿದ ವಿದ್ಯಾರ್ಥಿಗಳ ಮಾಹಿತಿಯನ್ನು ಪ್ರಾಂಶುಪಾಲರು ಮಂಡಲಿಯ PU EXAM ಲಾಗಿನ್‌ನಲ್ಲಿ ಇಂದೀಕರಿಸಲು ಕೊನೆಯ ದಿನಾಂಕ | | ಪ್ರಾಂಶುಪಾಲರು ಪರೀಕ್ಷಾ ಶುಲ್ಕವನ್ನು ಒಂದೇ ಕಂತಿನಲ್ಲಿ ಖಜಾನೆಗೆ ಸಂದಾಯ ಮಾಡಬೇಕಾದ ದಿನಾಂಕ | ಪ್ರಾಂಶುಪಾಲರು ಪರೀಕ್ಷಾ ಅರ್ಜಿಗಳನ್ನು ಮೂಲ ಚಲನ್ ಸಹಿತ ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಕಡ್ಡಾಯವಾಗಿ ಸಲ್ಲಿಸಬೇಕಾದ ದಿನಾಂಕ |
|---|---|---|---|
| ದಂಡರಹಿತ | ಫಲಿತಾಂಶ ಪ್ರಕಟಿಸಿದ ದಿನಾಂಕದಿಂದ 26/04/2023 ರವರೆಗೆ | 27/04/2023 | 28/04/2023 |
| ದಂಡಸಹಿತ ದಿನಕ್ಕೆ ರೂ 50 ರಂತೆ | 27/04/2023 ರಿಂದ 02/05/2023ರ ವರೆಗೆ | 03/05/2023 | 04/05/2023 |

ಜಿಲ್ಲಾ ಉಪನಿರ್ದೇಶಕರು, ಪ್ರಾಂಶುಪಾಲರಿಂದ ಸ್ವೀಕರಿಸಿದ ಪರೀಕ್ಷಾ ಅರ್ಜಿಗಳನ್ನು ಮಂಡಲಿಯ PU EXAM ಲಾಗಿನ್‌ನಲ್ಲಿ ಇಂಧೀಕರಿಸಿರುವುದನ್ನು ಕಡ್ಡಾಯವಾಗಿ ಖಾತ್ರಿಪಡಿಸಿಕೊಂಡು ಚೆಕ್‌ಲಿಸ್ಟನ್ನು ಪರಿಶೀಲಿಸಿ, ಪ್ರಾಂಶುಪಾಲರುಗಳಿಂದ ಅಪ್‌ಡೇಟ್ ಮಾಡಿರುವುದಕ್ಕೆ ಮುಚ್ಚಳಿಕೆ ಪತ್ರ ಪಡೆದ ನಂತರ ಕಾಲೇಜುವಾರು ಕ್ರೋಢೀಕೃತ ವಿದ್ಯಾರ್ಥಿಗಳ ಪಟ್ಟಿ, ಹಣ ಪಾವತಿಸಿರುವ ಮೂಲ ಚಲನ್ ಹಾಗೂ ಮುಚ್ಚಳಿಕೆ ಪತ್ರವನ್ನು **'ಖುದ್ದಾಗಿ'** ಕೆಳಗೆ ತಿಳಿಸಿದ ವೇಳಾಪಟ್ಟಿಯಂತೆ ಮಂಡಲಿಗೆ ಸಲ್ಲಿಸಬೇಕು. ಜಿಲ್ಲಾ ಉಪನಿರ್ದೇಶಕರುಗಳು, ಹಿಂದಿನ ವರ್ಷಗಳಲ್ಲಿ ಸದರಿ ದಾಖಲೆಗಳನ್ನು ಕೇಂದ್ರ ಕಛೇರಿಗೆ ವಿಳಂಬವಾಗಿ ನೀಡಿರುವ ಹಿನ್ನಲೆಯಲ್ಲಿ ಈ ವರ್ಷದಲ್ಲಿ **'ಮುದ್ದಾಂ'** ಆಗಿ ನಿಗದಿತ ದಿನಾಂಕದೊಳಗೆ ದಾಖಲೆಗಳನ್ನು ನೀಡದಿರುವ ಉಪನಿರ್ದೇಶಕರುಗಳು ಮತ್ತು ಪ್ರಾಂಶುಪಾಲರುಗಳನ್ನು ನೇರ ಹೊಣೆಗಾರರನ್ನಾಗಿ ಮಾಡಲಾಗುವುದು. ಆದ್ದರಿಂದ ಯಾವುದೇ ವಿಳಂಬಕ್ಕೆ ಆಸ್ಪದ ನೀಡದಿರಲು ಸೂಚಿಸಿದೆ.

| **ಅರ್ಜಿಗಳ ವಿವರ** | **ಮಂಡಲಿಗೆ ಸಲ್ಲಿಸಬೇಕಾದ ದಿನಾಂಕ** |
|---|---|
| ದಿನಾಂಕ:28/04/2023ರಂದು ಸ್ವೀಕರಿಸಿದ ದಂಡರಹಿತ ಪುನರಾವರ್ತಿತ ಹಾಗೂ ಫಲಿತಾಂಶ ತಿರಸ್ಕೃತ ವಿದ್ಯಾರ್ಥಿಗಳ ಅರ್ಜಿಗಳು | 29/04/2023 |
| ದಿನಾಂಕ:04/05/2023ರಂದು ಸ್ವೀಕರಿಸಿದ ದಂಡಸಹಿತ ಪುನರಾವರ್ತಿತ ಹಾಗೂ ಫಲಿತಾಂಶ ತಿರಸ್ಕೃತ ವಿದ್ಯಾರ್ಥಿಗಳ ಅರ್ಜಿಗಳು | 05/05/2023 |

20/4/23

ಅಧ್ಯಕ್ಷರು
ಕರ್ನಾಟಕ ಶಾಲಾ ಪರೀಕ್ಷೆ ಮತ್ತು
ಮೌಲ್ಯ ನಿರ್ಣಯ ಮಂಡಲಿ,
ಬೆಂಗಳೂರು.

ಪ್ರತಿಗಳು:

1. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರುಗಳು, ಪದವಿ ಪೂರ್ವ ಶಿಕ್ಷಣ ಇಲಾಖೆ ರವರ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ ಒಂದು ಪ್ರತಿಯನ್ನು ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.
2. ಪದವಿ ಪೂರ್ವ ಶಿಕ್ಷಣ ಬೋಧಿಸುವ ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ (ವಿದ್ಯಾರ್ಥಿಗಳಿಗೆ ಈ ಕುರಿತು ಸೂಕ್ತ ನಿರ್ದೇಶನ ನೀಡಲು)
3. ಗಣಕ ಶಾಖೆ. (ಮಂಡಲಿ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು)
4. ಹೆಚ್ಚುವರಿ/ಕಛೇರಿ ಪ್ರತಿ.